ಅ) ನಗರ ಪ್ರದೇಶಗಳಲ್ಲಿ ನಗರಾಭಿವೃದ್ಧಿಗಾಗಿ ಯೋಜನೆಗಳನ್ನು ತಯಾರಿಸಿ, ನಿಯೋಜಿಸಿ ಅನುಷ್ಠಾನಗಳಿಸುವುದು.

ಸ್ಥಳೀಯ ಸಂಸ್ಥೆಗಳಿಗೆ ಅಭಿವೃದ್ಧಿ ಕಾರ್ಯಕ್ರಮ ರೂಪಿಸಲು ತಾಂತ್ರಿಕ ಸಹಾಯ ನೀಡುವುದರೊಂದಿಗೆ ಮಾಸ್ಟರ್‌ಪ್ಲಾನ್ ತಯಾರಿಕೆಯಲ್ಲಿ ಸಹಾಯ ನೀಡುವುದು.

ಸ್ಥಳೀಯ ಸಂಸ್ಥೆಗಳಿಗೆ ಸಾಲ ಮತ್ತು ಅನುದಾನದ ಸಹಾಯವನ್ನು ವಿಸ್ತರಿಸುವುದು.

ಸ್ಥಳೀಯ ಸಂಸ್ಥೆಗಳು, ನಗರಾಭಿವೃದ್ಧಿ ಸಂಸ್ಥೆಗಳ ಸಾಮರ್ಥ್ಯ ಸಂವರ್ಧನೆ ಮತ್ತು ಹಣಕಾಸು ಸಂಪನ್ಮೂಲಗಳನ್ನು ವೃದ್ಧಿಸುವಲ್ಲಿ ತಾಂತ್ರಿಕ ಸಹಾಯ ಹಾಗೂ ಕನ್ಸಲ್‌ಟೆಂಟ್‌ಗಳ ಸಹಾಯ ನೀಡುವುದು.

ಇ) ಕೆ.ಯು.ಐ.ಡಿ.ಎಫ್.ಸಿ.ಯು ಕೇಂದ್ರ ಸರ್ಕಾರ ಪುರಸ್ಕೃತ ಬೆಂಗಳೂರು ಮೆಗಾಸಿಟಿ ಯೋಜನೆ ಮತ್ತು ಎಷಿಯನ್ ಡೆವಲಪ್‌ಮೆಂಟ್ ಬ್ಯಾಂಕ್ ಸಹಾಯದ ಎರಡು ಯೋಜನೆಗಳಾದ ಕರ್ನಾಟಕ ನಗರ ಮೂಲ ಸೌಕರ್ಯ ಅಭಿವೃದ್ಧಿ ಯೋಜನೆ (ಕೆಯುಐಡಿಪಿ) ಮತ್ತು ಕರ್ನಾಟಕ ನಗರಾಭಿವೃದ್ಧಿ ಮತ್ತು ಕರಾವಳಿ ಪರಿಸರ ಕಾರ್ಯ ನಿರ್ವಾಹಣಾ ಯೋಜನೆ (ಕೆಯುಡಿಸಿಇಎಮ್‌ಪಿ)ಗಳ ಅನುಷ್ಠಾನ : ನೋಡಲ್ ಏಜೆನ್ಸಿಯಾಗಿರುತ್ತದೆ. ವಿಶ್ವಬ್ಯಾಂಕ್‌ನೊಂದಿಗೆ ಉತ್ತರ : ಮಧ್ಯ ಕರ್ನಾಟಕದಲ್ಲಿ ಸಾಧ್ಯತೆಯಿರುವ ಯೋಜನೆಗಾಗಿ ಮಾತುಕತೆ ನಡೆಯುತ್ತಿದೆ. ಇದಲ್ಲದೆ ಕೆ.ಯು.ಐ.ಡಿ.ಎಫ್.ಸಿ.ಯು 6 ಮಹಾನಗರ ಪಾಲಿಕೆಗಳಲ್ಲಿ ಗಣೀಕರಣಗೊಳಿಸುವ ಕಾರ್ಯಕ್ರಮದಲ್ಲಿ ತೊಡಗಿಸಿಕೊಂಡಿದೆ.

ಈ) -ಇರುವುದಿಲ್ಲ-

ದೊಡ್ಡಬಳ್ಳಾಪುರ ತಾಲ್ಲೂಕಿನ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸುವುದು.

2671 (3440) ಶ್ರೀ ಕೃಷ್ಣಪ್ಪ ವಿ. (ದೊಡ್ಡಬಳ್ಳಾಪುರ) :— ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿರುವ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿನಿಲಯಗಳ ಸಂಖ್ಯೆ ಎಷ್ಟು; ಈ ವಿದ್ಯಾರ್ಥಿ ನಿಲಯಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು;

ಆ) ದೊಡ್ಡಬಳ್ಳಾಪುರ ತಾಲ್ಲೂಕಿನಲ್ಲಿರುವ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ವಿದ್ಯಾರ್ಥಿನಿಲಯಗಳ ಸಂಖ್ಯೆ ಎಷ್ಟು; ಇಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು;

ಇ) ದೊಡ್ಡಬಳ್ಳಾಪುರ ತಾಲ್ಲೂಕಿಗೆ ಹೊಸದಾಗಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ವಿದ್ಯಾರ್ಥಿನಿಲಯ ಮಂಜೂರಾಗಿದೆಯೇ; ಹಾಗಿದ್ದಲ್ಲಿ ಇದು ಯಾವ ಹಂತದಲ್ಲಿದೆ; ಯಾವಾಗ ಕೆಲಸ ಪ್ರಾರಂಭಿಸಲಾಗುವುದು?

ಶ್ರೀ ಕಾಗೋಡು ತಿಮ್ಮಪ್ಪ (ಸಮಾಜ ಕಲ್ಯಾಣ ಸಚಿವರು) :—

ಅ)

	ವಿದ್ಯಾರ್ಥಿನಿಲಯಗಳ ಸಂಖ್ಯೆ	ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ
ಪ. ಜಾತಿ	68	4547
ಪ. ಪಂಗಡ	02	100
ಆ) ಪ.ಜಾತಿ	07	564
ಪ. ಪಂಗಡ	-	

ಇ) 1996-1997ನೇ ಸಾಲಿನಲ್ಲಿ ದೊಡ್ಡಬಳ್ಳಾಪುರ ತಾಲ್ಲೂಕಿನ ಹೊಸಹಳ್ಳಿಗೆ ಹಾಗೂ 1997-1998 ನೇ ಸಾಲಿನಲ್ಲಿ ಸಕ್ಕರೆಗೊಳ್ಳಹಳ್ಳಿಗೆ ಒಂದೊಂದು ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯಗಳನ್ನು ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗಾಗಿ ಮಂಜೂರು ಮಾಡಲಾಗಿದೆ ಹೊಸಹಳ್ಳಿಯ ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯದ ಕಟ್ಟಡವನ್ನು ರೂ.20.30 ಲಕ್ಷಗಳ ಅಂದಾಜಿನಲ್ಲಿ ನಿರ್ಮಿಸಲು ಆಡಳಿತಾತ್ಮಕ ಅನುಮೋದನೆ ನೀಡಿ ರೂ.6.40 ಲಕ್ಷಗಳನ್ನು ಕರ್ನಾಟಕ ಭೂಸೇನಾ ನಿಗಮಕ್ಕೆ ಬಿಡುಗಡೆ ಮಾಡಿದೆ. ಕಾಮಗಾರಿಯನ್ನು ಶೀಘ್ರವಾಗಿ ಪ್ರಾರಂಭಿಸಲಾಗುವುದು. ಸಕ್ಕರೆಗೊಳ್ಳಹಳ್ಳಿಯ ವಿದ್ಯಾರ್ಥಿನಿಲಯದ ಕಟ್ಟಡದ ನಿರ್ಮಾಣಕ್ಕಾಗಿ ಸೂಕ್ತ ನಿವೇಶನ ಪಡೆಯಲು ಕ್ರಮ ಕೈಗೊಂಡಿದ್ದು ನಿವೇಶನ ಮಂಜೂರಾತಿಯನ್ನು ಅನುಸರಿಸಿ ಕಟ್ಟಡದ ನಿರ್ಮಾಣ ಕಾರ್ಯವನ್ನು ಕೈಗೊಳ್ಳಲಾಗುವುದು.

ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯವತಿಯಿಂದ ದೊಡ್ಡಬಳ್ಳಾಪುರದ ತಾಲ್ಲೂಕಿನಲ್ಲಿ ಪರಿಶಿಷ್ಟ ವರ್ಗದ ವಿದ್ಯಾರ್ಥಿನಿಲಯವು ಮಂಜೂರಾಗಿರುವುದಿಲ್ಲ.

ಸರ್ಕಾರದ ಅನುದಾನ ಪಡೆಯುತ್ತಿರುವ ವಿದ್ಯಾರ್ಥಿನಿಲಯಗಳಲ್ಲಿ ಕೆಲಸ ಮಾಡುತ್ತಿರುವ ಸಿಬ್ಬಂದಿ ವರ್ಗಗಳ ವೇತನ ಹೆಚ್ಚಿಸುವಿಕೆ.

2672 (3429) ಶ್ರೀ ಲಕ್ಷ್ಮೀನಾರಾಯಣ ಎಂ.ಡಿ. (ಅಣ್ಣಯ್ಯ) ತುರುವೇಕೆರೆ):— ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

E-6-II